<u>ಕರ್ನಾಟಕ ವಿಧಾನ ಪರಿಷತ್ತು</u>

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 721 |
| ಮಾನ್ಯ ಸದಸ್ಯರ ಹೆಸರು | ಶ್ರೀ ಮಧು ಜಿ. ಮಾದೇಗೌಡ<br>(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 19.09.2022 |

| | ಪ್ರಶ್ನೆ | ಉತ್ತರ |
|---|---|---|
| (ಅ) | ಹೊಸ ವಿಶ್ವವಿದ್ಯಾನಿಲಯಗಳ ಸ್ಥಾಪನೆಯಿಂದ ಮೈಸೂರು ವಿಶ್ವವಿದ್ಯಾನಿಲಯದ ಕಾರ್ಯವ್ಯಾಪ್ತಿಯಲ್ಲಿ ಉಳಿಯುವ ಕಾಲೇಜುಗಳು ಮತ್ತು ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ಹೊಸ ವಿಶ್ವವಿದ್ಯಾನಿಲಯಗಳ ಸ್ಥಾಪನೆಯಿಂದ ಮೈಸೂರು ವಿಶ್ವವಿದ್ಯಾನಿಲಯದ ಕಾರ್ಯವ್ಯಾಪ್ತಿಯಲ್ಲಿ ಉಳಿಯುವ ಕಾಲೇಜುಗಳು ಮತ್ತು ವಿದ್ಯಾರ್ಥಿಗಳ ಅಂಕಿ-ಅಂಶಗಳ ಮಾಹಿತಿ ಈ ಕೆಳಕಂಡಂತಿದೆ. (ಕೆಳಗಿನ ಕೋಷ್ಟಕ 1) |

| ಶೈಕ್ಷಣಿಕ ವರ್ಷ | ಕಾಲೇಜುಗಳ/ಸ್ನಾತಕೋತ್ತರ ಕೇಂದ್ರದ ವಿವರ ಮತ್ತು ಸಂಖ್ಯೆ | | ವಿದ್ಯಾರ್ಥಿಗಳ ಸಂಖ್ಯೆ |
|---|---|---|---|
| 2021-22 | ಪ್ರ.ದ.ಕಾ | 87 | 65036 |
| | ಬಿ.ಎಡ್ | 13 | 1818 |
| | ಸ್ನಾತಕೋತ್ತರ ಕೇಂದ್ರ | 01 | 9151 |
| ಒಟ್ಟು | | | 76005 |

2022-23ನೇ ಸಾಲಿನ ವಿದ್ಯಾರ್ಥಿಗಳ ಪ್ರವೇಶಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ.

| | ಪ್ರಶ್ನೆ | ಉತ್ತರ |
|---|---|---|
| (ಆ) | ಮೈಸೂರು ವಿಶ್ವವಿದ್ಯಾನಿಲಯದ ಕಾರ್ಯವ್ಯಾಪ್ತಿಯಲ್ಲಿದ್ದ ಎಷ್ಟು ಕಾಲೇಜುಗಳು ಮತ್ತು ಸ್ನಾತಕೋತ್ತರ ಕೇಂದ್ರಗಳು ಹೊಸ ವಿಶ್ವವಿದ್ಯಾನಿಲಯಗಳಿಗೆ ಸೇರಲಿವೆ; (ವಿವರ ನೀಡುವುದು) | ಮೈಸೂರು ವಿಶ್ವವಿದ್ಯಾನಿಲಯದ ಕಾರ್ಯವ್ಯಾಪ್ತಿಯಲ್ಲಿದ್ದ ಕಾಲೇಜುಗಳು ಮತ್ತು ಸ್ನಾತಕೋತ್ತರ ಕೇಂದ್ರಗಳು ಹೊಸ ವಿಶ್ವವಿದ್ಯಾಲಯಗಳಿಗೆ ಸೇರಲಿರುವ ವಿವರ ಈ ಕೆಳಕಂಡಂತಿದೆ. |

| ಕ್ರ.ಸಂ. | ಹೊಸ ವಿಶ್ವವಿದ್ಯಾಲಯದ ಹೆಸರು | ಕಾಲೇಜುಗಳ ವಿವರ | | ಸ್ನಾತಕೋತ್ತರ ಕೇಂದ್ರದ ವಿವರ |
|---|---|---|---|---|
| | | ಪ್ರ.ದ.ಕಾ | ಬಿ.ಎಡ್ | |
| 1 | ಮಂಡ್ಯ ವಿಶ್ವವಿದ್ಯಾಲಯ | 36 | 13 | 01 |
| 2 | ಚಾಮರಾಜನಗರ ವಿಶ್ವವಿದ್ಯಾಲಯ | 17 | 02 | 01 |
| 3 | ಹಾಸನ ವಿಶ್ವವಿದ್ಯಾಲಯ | 46 | 09 | 01 |

| | ಪ್ರಶ್ನೆ | ಉತ್ತರ |
|---|---|---|
| (ಇ) | ಹೊಸ ವಿಶ್ವವಿದ್ಯಾನಿಲಯಗಳಿಗೆ ಬೇಕಾದ ಮೂಲಸೌಕರ್ಯ ಮತ್ತು ಬೋಧಕರು ಹಾಗೂ ಸಿಬ್ಬಂದಿ ನೇಮಕಕ್ಕೆ ಸರ್ಕಾರ ಅನುದಾನ ಒದಗಿಸಲಿದೆಯೇ; ಒದಗಿಸದಿದ್ದಲ್ಲಿ, ಈ ವ್ಯವಸ್ಥೆಯನ್ನು ಹೊಸ ವಿಶ್ವವಿದ್ಯಾನಿಲಯಗಳು ಹೇಗೆ ಮಾಡಿಕೊಳ್ಳಬೇಕು? (ವಿವರ ನೀಡುವುದು) | ಹೊಸದಾಗಿ ಪ್ರಾರಂಭಿಸಲಿರುವ ಮಂಡ್ಯ ವಿಶ್ವವಿದ್ಯಾಲಯ, ಚಾಮರಾಜನಗರ ವಿಶ್ವವಿದ್ಯಾಲಯ ಮತ್ತು ಹಾಸನ ವಿಶ್ವವಿದ್ಯಾಲಯವು ಈಗಾಗಲೇ ಮಾತೃ ವಿಶ್ವವಿದ್ಯಾಲಯಕ್ಕೆ (ಮೈಸೂರು ವಿಶ್ವವಿದ್ಯಾಲಯಕ್ಕೆ) ಮಂಜೂರಾಗಿರುವ ಹುದ್ದೆಗಳಲ್ಲಿ ಅವಶ್ಯವಿರುವ ಹುದ್ದೆಗಳನ್ನು ಬಳಸಿಕೊಂಡು ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳಿಗಿಂತ ಭಿನ್ನವಾಗಿ ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೆ, ಈ ವರ್ಷ ರೂ.2.00 ಕೋಟಿಗಳ ಆವರ್ತಕ ವೆಚ್ಚ ಬಳಸಿ ಕಾರ್ಯನಿರ್ವಹಿಸಲಿದೆ. |

ಸಂಖ್ಯೆ: ಇಡಿ 65 ಯುಎಂವಿ 2022

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು